# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ-577002.
ದೂರವಾಣಿ ಸಂಖ್ಯೆ: 08192-208029

ಸಂಖ್ಯೆ: ದಾವಿವಿ/ಶೈ/08/2019-20/4678 ದಿನಾಂಕ:31.07.2019

## :ಸುತ್ತೋಲೆ:

ವಿಷಯ: 2019-20ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಪ್ರವೇಶ ದಿನಾಂಕವನ್ನು ನಿಗದಿಪಡಿಸಿರುವ ಬಗ್ಗೆ.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ: ದಾವಿ/ಶೈ/08/2019-20/3754, ದಿನಾಂಕ: 17.07.2019.
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:31.07.2019

********

ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ ಉಲ್ಲೇಖ (1)ರ ಪತ್ರದಲ್ಲಿ 2019-20ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಪ್ರವೇಶ ದಿನಾಂಕ:27.07.2019 ಎಂದು ನಿಗದಿಪಡಿಸಲಾಗಿತ್ತು. ಆದರೆ ಸದರಿ ದಿನಾಂಕದಂದು ಸಾರ್ವತ್ರಿಕ ರಜೆ ಘೋಷಣೆಯಾಗಿರುವುದರಿಂದ ದಿನಾಂಕ:29.07.2019 ರಂದು ದಂಡ ಶುಲ್ಕ ರೂ:500/-ಗಳೊಂದಿಗೆ ಕೊನೆಯ ದಿನಾಂಕವೆಂದು ಮರು ನಿಗದಿಪಡಿಸಲಾಗಿತ್ತು.

ಆದರೆ, ಪ್ರಥಮ ವರ್ಷದ ಪದವಿ ಕೋರ್ಸುಗಳ ಪ್ರವೇಶಾತಿ ಬಯಸಿ ವಿದ್ಯಾರ್ಥಿಗಳು ಬೇಡಿಕೆ ಸಲ್ಲಿಸುತ್ತಿರುವುದನ್ನು ಗಮನಿಸಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ, ಸದರಿ ಪ್ರವೇಶಾತಿ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಪದವಿ ಕೋರ್ಸ್‌ಗಳಿಗೆ (ಪ್ರಥಮ, ದ್ವಿತೀಯ, ತೃತೀಯ) ಪ್ರವೇಶಾತಿಯನ್ನು ದಂಡ ಶುಲ್ಕ ರೂ:1000/-ಗಳೊಂದಿಗೆ ದಿನಾಂಕ:31.07.2019 ರಿಂದ 08.08.2019ಕ್ಕೆ ಮರುನಿಗದಿಪಡಿಸಲಾಗಿದೆ ಎಂದು ತಿಳಿಸಲು ನಿರ್ದೇಶಿತನಾಗಿದ್ದೇನೆ.

ಆದೇಶಾನುಸಾರ,

ಕುಲಸಚಿವರು
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ - 577002.

ಗೆ,

ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿ:-

1. ಕುಲಸಚಿವರು (ಪರೀಕ್ಷಾಂಗ), ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
2. ಮಾನ್ಯ ಕುಲಪತಿಗಳ/ಕುಲಸಚಿವರ ಆಪ್ತಕಾರ್ಯಾಲಯ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
3. ಕಛೇರಿ ಪ್ರತಿ.